# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅರವಿಂದ ಕುಮಾರ್ ಅರಳಿ ಇವರು ನಿಯಮ 72 ರ ಪ್ರಸ್ತಾವನೆ

**ಪ್ರಸ್ತಾವನೆ:**

ಬೀದರ ಜಿಲ್ಲೆಯ ಬೀದರ ಹಾಗೂ ಔರಾದ ತಾಲ್ಲೂಕಿನಲ್ಲಿ ಸುಮಾರು 250 ಕ್ಕಿಂತ ಹೆಚ್ಚಿನ ಅಲೆಮಾರಿ, ಅರೆಅಲೆಮಾರಿ ಜನಾಂಗದ ಕುಟುಂಬಗಳಿವೆ. ಇವರಿಗೆ ಯಾವುದೇ ಮೂಲಭೂತ ಸೌಕರ್ಯಗಳಿಲ್ಲದೆ, ಕೊಳಚೆ ಪ್ರದೇಶದ ಗುಡಿಸಿಲಿನಲ್ಲಿ ಬದುಕುತ್ತಿರುವ ಇವರು, ಮಳೆಗಾಲದ ಸಂದರ್ಭದಲ್ಲಿ ತುಂಬಾ ಕಷ್ಟವನ್ನು ಅನುಭವಿಸುತ್ತಿದ್ದಾರೆ. ಇಡೀ ಬದುಕೇ ಬೀದಿಯ ಗುಡಿಸಲಲ್ಲಿ ಬದುಕಬೇಕಾದ ದಾರುಣ ಸ್ಥಿತಿ ಇವರದ್ದಾಗಿದೆ. ಇಲ್ಲಿಯವರೆಗೂ ಇವರಿಗೆ ಸರ್ಕಾರ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕುರಿತು.

**ಹೇಳಿಕೆ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಅಲೆಮಾರಿ/ಅರೆಅಲೆಮಾರಿ ಜನಾಂಗದವರ ವಸತಿ ರಹಿತರಿಗೆ ಅಲೆಮಾರಿ/ಅರೆಅಲೆಮಾರಿ ಜನಾಂಗಗಳ ಅಭಿವೃದ್ಧಿ ಕಾರ್ಯಕ್ರಮದಡಿ ವಸತಿ ಯೋಜನೆಯಡಿ ವಸತಿ ಸೌಲಭ್ಯವನ್ನು ರಾಜೀವ್‌ಗಾಂಧಿ ವಸತಿ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಅಲೆಮಾರಿ/ಅರೆಅಲೆಮಾರಿ ಜನಾಂಗದವರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಿ ಒಂದು ಸ್ಥಳದಲ್ಲಿ ನೆಲೆನಿಲ್ಲಲು ಅವಕಾಶ ನೀಡುವುದು. ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿರುತ್ತದೆ. ಬೀದರ ಜಿಲ್ಲೆಗೆ ಅಲೆಮಾರಿ/ಅರೆಅಲೆಮಾರಿ ಸಮುದಾಯಕ್ಕೆ ವಸತಿ ಸೌಲಭ್ಯ ಯೋಜನೆಯಡಿ ಈವರೆಗೆ ಬೀದರ ಜಿಲ್ಲೆಯ ಬೀದರ್ ಹಾಗೂ ಔರಾದ ತಾಲ್ಲೂಕುಗಳಲ್ಲಿ ಒಟ್ಟು 135 ಮನೆಗಳನ್ನು ನಿರ್ಮಾಣ ಮಾಡಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ.ಬಿಸಿಡಬ್ಲ್ಯೂ 687 ಬಿಎಂಎಸ್ 2022, ದಿ:15-02-2023ರಲ್ಲಿ 2007-08ನೇ ಸಾಲಿನಿಂದ 2019-20ನೇ ಸಾಲಿನವರೆಗೆ ವಸತಿ ಸೌಲಭ್ಯ ಮಂಜೂರಾಗಿ ವಿವಿಧ ಕಾರಣಗಳಿಂದ ಕಾಮಗಾರಿ ಪ್ರಾರಂಭಿಸದ 6141 ಮನೆಗಳ ಜಿಲ್ಲಾವಾರು ಮರು ಗುರಿ ನಿಗಧಿಪಡಿಸಿ ಅನುಮೋದನೆ ನೀಡಲಾಗಿರುತ್ತದೆ. ಈ ಪೈಕಿ ಬೀದರ ಜಿಲ್ಲೆಗೆ ಅಲೆಮಾರಿ/ ಅರೆಅಲೆಮಾರಿ ಸಮುದಾಯಕ್ಕೆ 190 ಮನೆಗಳ ಗುರಿಯನ್ನು ನಿಗಧಿಪಡಿಸಲಾಗಿರುತ್ತದೆ. ಈ ಸಂಬಂಧ ಅಗತ್ಯ ಪ್ರಸ್ತಾವನೆಯನ್ನು ಸಲ್ಲಿಸಲು ಜಿಲ್ಲಾಡಳಿತಕ್ಕೆ ಸೂಚಿಸಲಾಗಿದ್ದು, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಆಯ್ಕೆ ಸಮಿತಿಯಲ್ಲಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ, ಪೂರಕ ದಾಖಲಾತಿಗಳನ್ನು ಪಡೆಯುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಬೀದರ ಜಿಲ್ಲೆಯಿಂದ ಸ್ವೀಕೃತವಾಗುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಬೀದರ ಹಾಗೂ ಔರಾದ ತಾಲ್ಲೂಕಿನಲ್ಲಿರುವ ಅಲೆಮಾರಿ/ಅರೆಅಲೆಮಾರಿ ಜನಾಂಗದ ಅರ್ಹ ಕುಟುಂಬಗಳಿಗೆ ಅಲೆಮಾರಿ/ಅರೆಅಲೆಮಾರಿ ಜನಾಂಗಗಳ ಅಭಿವೃದ್ಧಿ ಕಾರ್ಯಕ್ರಮದಡಿ ವಸತಿಯೋಜನೆಯಡಿ ವಸತಿ ಸೌಲಭ್ಯವನ್ನು ಕಲ್ಪಿಸಲು ಕ್ರಮವಹಿಸಲಾಗುವುದು.

**ಸಂಖ್ಯೆ:ಹಿಂವಕ 364 ಬಿಂಎಂಎಸ್ 2023**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.